ಶ್ರೀ ಕೆ. ಜೆ. ಜಾರ್ಜ್ (ಆಹಾರ ಮತ್ತು ನಾಗರಿಕ ರಾಜ್ಯ ಸಚಿವರು).—

ಅ) ೮೫೮.

ಆ) ಸಹಕಾರಿ ಸಂಘ ಸಂಸ್ಥೆ ... ೫೭೯
ಖಾಸಗಿ ... ೨೭೬
ಇತರ ... ೩
(ಯಂತ್ರಕ ಮಂಜಳಿ)

ಒಟ್ಟು ೮೫೮

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಹೌದು.

ಬೆಂಗಳೂರು ನಗರದಲ್ಲಿ ಟ್ರಕ್ ಟರ್ಮಿನಲ್ ನಿರ್ಮಾಣ ಮಾಡುವ ಬಗ್ಗೆ

೩೧೨. ಶ್ರೀ ಎಂ. ಎಸ್. ಆತ್ಮಾನಂದ (ಮಂಡ್ಯ).—ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಮತ್ತು ಸಾರಿಗೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬೆಂಗಳೂರು ನಗರದ ಹೊರವಲಯದಲ್ಲಿ ಟ್ರಕ್ ಟರ್ಮಿನಲ್ ನಿರ್ಮಾಣ ಮಾಡುವ ಯೋಚನೆ ಸರ್ಕಾರದಲ್ಲಿದೆಯೇ?

ಆ) ಹಾಗಿದ್ದಲ್ಲಿ ಸರ್ಕಾರವು ಈ ದಿಶೆಯಲ್ಲಿ ಯಾವ ಕ್ರಮ ಕೈಗೊಂಡಿದೆ?

ಶ್ರೀ ಕೆ.ಜೆ. ಜಾರ್ಜ್ (ಆಹಾರ ಮತ್ತು ನಾಗರೀಕ ಸರಬರಾಜು ಮಂತ್ರಿಗಳು).—

ಅ) ಹೌದು.

ಆ) ಈ ಪ್ರಸ್ತಾವನೆಯನ್ನು ಸರ್ಕಾರವು ಪರಿಶೀಲಿಸುತ್ತಿದೆ.

ಮಂಡ್ಯ ಡಿಪೋದಲ್ಲಿ ಬಸ್ಸು ಮತ್ತು ಸಿಬ್ಬಂದಿ ಕೊರತೆಯ ಬಗ್ಗೆ

೪೨೫. ಶ್ರೀ ಎಂ. ಎಸ್. ಆತ್ಮಾನಂದ (ಮಂಡ್ಯ) —ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಮತ್ತು ಸಾರಿಗೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮಂಡ್ಯ ನಗರದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಡಿಪೋ ಪ್ರಾರಂಭವಾಗಿ ಎಷ್ಟು ಕಾಲವಾಗಿದೆ?

ಆ) ಈ ಡಿಪೋವಿನಲ್ಲಿ ಸಿಬ್ಬಂದಿಯ ಮತ್ತು ಬಸ್ಸಿನ ಕೊರತೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ, ಈ ಕೊರತೆ ನೀಗಿಸಲು ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?

ಈ) ಮಂಡ್ಯ ನಗರದಲ್ಲಿನ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣದ ವಿಸ್ತರಣೆಗೆ ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಕೆ.ಜೆ. ಜಾರ್ಜ್ (ಆಹಾರ ಮತ್ತು ನಾಗರೀಕ ಸರಬರಾಜು ಮಂತ್ರಿಗಳು).—

ಅ) ದಿನಾಂಕ ೧-೫-೧೯೮೯ ರಂದು.

ಆ) ಡಿಪೋವಿನಲ್ಲಿ ಈಗಿರುವ ಷಡ್ಯೂಲುಗಳ ಓಡಾಟಕ್ಕೆ ಬಸ್ಸು ಮತ್ತು ಸಿಬ್ಬಂದಿಯ ಕೊರತೆ ಯಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಅಂತಹ ಅಗತ್ಯತೆ ಕಂಡು ಬಂದಾಗ ವಿಸ್ತರಿಸಲಾಗುವುದು.